ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

14

ಇಲಾಖೆ / ವಿಷಯ : DEPARTMENT / SUBJECT: ಸಂಪುಟ (ಕೇಂದ್ರ)

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 25/6/2020

## ಕೇಂದ್ರ ಸಚಿವ ಸಂಪುಟ ಸಮ್ಮತಿ | 35 ಲಕ್ಷ ಉದ್ಯೋಗ ಸೃಷ್ಟಿ ನಿರೀಕ್ಷೆ

# ಹೈನುಗಾರಿಕೆಗೆ 15 ಸಾವಿರ ಕೋಟಿ



**ಹೊಸದಿಲ್ಲಿ:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಬುಧವಾರ ನಡೆದ ಕೇಂದ್ರ ಸಚಿವ ಸಂಪುಟ ಸಭೆ ಆರ್ಥಿಕ ಉತ್ತೇಜನ ಸಂಬಂಧ ಹೈನುಗಾರಿಕೆ, ಕುಕ್ಕುಟೋದ್ಯಮ, ಮಾಂಸ ಸಂಸ್ಕರಣೆ, ಬಾಹ್ಯಾಕಾಶ ಸೇರಿ ಹಲವು ಕ್ಷೇತ್ರಗಳಲ್ಲಿ ಹಲವು ಮಹತ್ವದ ನಿರ್ಧಾರಗಳನ್ನು ತೆಗೆದುಕೊಂಡಿದೆ. ಮುದ್ರಾ ಯೋಜನೆಯಲ್ಲಿ ಬಡ್ಡಿ ಸಬ್ಸಿಡಿ ನಿರ್ಧಾರ ಪ್ರಕಟಿಸುವ ಮೂಲಕ ಸಣ್ಣ ಉದ್ಯಮದಾರರಿಗೆ ಅನುಕೂಲ ಮಾಡಿಕೊಟ್ಟಿದೆ.

ಹಾಲಿನ ಡೇರಿ, ಕೋಳಿ ಫಾರ್ಮ್ ಮತ್ತು ಮಾಂಸ ಸಂಸ್ಕರಣಾ ಘಟಕ ಸ್ಥಾಪಿಸಲು ಮುಂದೆ ಬರುವ ಖಾಸಗಿ ಕಂಪನಿಗಳಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಈ ಕ್ಷೇತ್ರದ ಮೂಲಸೌಕರ್ಯ ಅಭಿವೃದ್ಧಿಗೆ 15 ಸಾವಿರ ಕೋಟಿ ರೂ. ಅನುದಾನ ಒದಗಿಸುವ ಪ್ರಸ್ತಾವಕ್ಕೆ ಸಂಪುಟ ಸಭೆ ಒಪ್ಪಿಗೆ ಸೂಚಿಸಿದೆ. ಈ ಕಂಪನಿಗಳಿಗೆ ಹಾಲಿ ಇರುವ ಹಲವು ವಿನಾಯಿತಿಗಳ ಜತೆಗೆ ಶೇ. 3ರವರೆಗೆ ಬಡ್ಡಿ ರಿಯಾಯಿತಿ ಸಿಗಲಿದೆ. ಇದರಿಂದ ಹಾಲು ಮತ್ತು ಹಾಲಿನ ಉತ್ಪನ್ನಗಳ, ಸಂಸ್ಕರಿತ ಮಾಂಸದ ಉತ್ಪನ್ನಗಳ ಉತ್ಪಾದನೆಗೆ ಹಾಗೂ ರಫ್ತಿಗೆ ಉತ್ತೇಜನ ಸಿಗಲಿದೆ. ಇದರಿಂದ 35 ಲಕ್ಷ ಹೊಸ ಉದ್ಯೋಗ ಸೃಷ್ಟಿಯಾಗುವ ನಿರೀಕ್ಷೆ ಹೊಂದಲಾಗಿದೆ ಎಂದು ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಪ್ರಕಾಶ್ ಜಾವಡೇಕರ್ ಸಂಪುಟ ಸಭೆ ಬಳಿಕ ಮಾಧ್ಯಮಗಳಿಗೆ ವಿವರ ನೀಡಿದರು.

15 ಸಾವಿರ ಕೋಟಿ ರೂ. ನೆರವಿನ ಯೋಜನೆ ಕೋವಿಡ್ ಬಿಕ್ಕಟ್ಟು ಎದುರಿಸಲು ಸರಕಾರ ಘೋಷಿಸಿದ್ದ 20 ಲಕ್ಷ ಕೋಟಿ ರೂ. ಮೊತ್ತದ ಆರ್ಥಿಕ ಪ್ಯಾಕೇಜ್‌ನ ಭಾಗವಾಗಿದೆ ಎಂದು ಪಶು ಸಂಗೋಪನಾ ಸಚಿವ ಗಿರಿರಾಜ್ ಸಿಂಗ್ ಹೇಳಿದರು.

**ಅವಧಿ ವಿಸ್ತರಣೆ:** ಹಿಂದುಳಿದ ವರ್ಗಗಳಲ್ಲಿ ಉಪ ಜಾತಿಗಳನ್ನು ವರ್ಗೀಕರಿಸುವ ಉದ್ದೇಶದೊಂದಿಗೆ ಸ್ಥಾಪಿತವಾಗಿರುವ ಆಯೋಗದ ಕಾರ್ಯಾವಧಿಯನ್ನು ಮುಂದಿನ ವರ್ಷದ ಜ.31ರವರೆಗೆ ವಿಸ್ತರಿಸಲೂ ಸಂಪುಟ ಒಪ್ಪಿಗೆ ನೀಡಿದೆ.

### ಮುದ್ರಾ ಸಾಲದಲ್ಲಿ ಬಡ್ಡಿ ಸಬ್ಸಿಡಿ

**ಕೋವಿಡ್-19 ಬಿಕ್ಕಟ್ಟಿನ ಸಮಯದಲ್ಲಿ ಸ್ವಂತ ಉದ್ಯಮ ಆರಂಭಿಸುವವರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಮುದ್ರಾ ಶಿಶು ಸಾಲ ಯೋಜನೆ ಅಡಿ 50,000 ರೂ.ವರೆಗೆ ಸಾಲ ಪಡೆಯುವವರಿಗೆ ಶೇ.2ರ ಬಡ್ಡಿದರಲ್ಲಿ ಸಬ್ಸಿಡಿ ನೀಡುವ ಪ್ರಸ್ತಾವಕ್ಕೆ ಸಂಪುಟ ಒಪ್ಪಿಗೆ ನೀಡಿದೆ. ಈ ವಿನಾಯಿತಿ 2020ರ ಮಾರ್ಚ್ 20ರೊಳಗೆ ಸಾಲ ಪಡೆದವರಿಗೆ ಸಿಗಲಿದೆ. ಇದಕ್ಕಾಗಿ ಸರಕಾರ ಪ್ರಸ್ತ ಹಣಕಾಸು ವರ್ಷದಲ್ಲಿ 1540 ಕೋಟಿ ರೂ. ತೆಗೆದಿರಿಸಲಿದೆ.**

**ಕೋವಿಡ್-19 ಬಿಕ್ಕಟ್ಟಿನಲ್ಲೂ ದೇಶದ ಆರ್ಥಿಕತೆ ಚೇತರಿಕೆ ಕಾಣುತ್ತಿದ್ದು ರೈತರಿಗೆ, ಸಣ್ಣ ಉದ್ದಿಮೆಗಳಿಗೆ ಆರ್ಥಿಕ ಉತ್ತೇಜನ ಹಾಗೂ ಬಾಹ್ಯಾಕಾಶ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾಧಿಸಲು ನಮ್ಮ ಸರಕಾರ ಮಹತ್ವದ ನಿರ್ಧಾರಗಳನ್ನು ಕೈಗೊಂಡಿದೆ. ಆರ್ಥಿಕ ಅಭಿವೃದ್ಧಿ ಕ್ರಮಗಳು ಮುಂದುವರಿಯಲಿವೆ.**

**-ನರೇಂದ್ರ ಮೋದಿ** ಪ್ರಧಾನಿ
(ಟ್ವೀಟ್ ಮಾಡಿದ್ದು)

### ಬಾಹ್ಯಾಕಾಶದಲ್ಲಿ ಖಾಸಗಿಯವರಿಗೆ ಅವಕಾಶ

ಬಾಹ್ಯಾಕಾಶ ಕ್ಷೇತ್ರಕ್ಕೆ ಸಂಬಂಧಿಸಿದ ಅನೇಕ ಯೋಜನೆಗಳಲ್ಲಿ ಖಾಸಗಿ ಕಂಪನಿಗಳ ಪಾಲುದಾರಿಕೆಗೆ ಅವಕಾಶ ಕಲ್ಪಿಸುವ ಪ್ರಸ್ತಾವಕ್ಕೂ ಸಂಪುಟ ಅಸ್ತು ಎಂದಿದೆ. ಸರಕಾರಿ ಸ್ವಾಮ್ಯದ ಇಂಡಿಯನ್ ಸ್ಪೇಸ್ ಪ್ರಮೋಷನ್ ಅಂಡ್ ಆಥರೈಸೇಷನ್ ಸೆಂಟರ್ (ಇನ್-ಸ್ಪೇಸ್), ನ್ಯೂ ಸ್ಪೇಸ್ ಇಂಡಿಯಾ ಲಿಮಿಟೆಡ್ (ಎನ್‌ಎಸ್‌ಐಎಲ್) ಹೊಸ ಕಂಪನಿಗಳಿಗೆ ನೆರವು ನೀಡಲಿದೆ. ಬಾಹ್ಯಾಕಾಶ ತಂತ್ರಜ್ಞಾನ ಅಭಿವೃದ್ಧಿಗೆ ಇದರಿಂದ ವೇಗ ಸಿಗಲಿದ್ದು, ಭಾರತ ಮುಂಚೂಣಿಯಲ್ಲಿರಲು ನೆರವಾಗಲಿದೆ.